# ಯಕೋಬನು ಬರೆದ ಪತ್ರ

## ಮುನ್ನುಡಿ

ಜಗದಲ್ಲೆಲ್ಲಾ ಚದರಿರುವ ಸರ್ವ ದೇವಜನರನ್ನು ಉದ್ದೇಶಿಸಿ ಬರೆದಿರುವ ಪತ್ರವಿದು. ತಮ್ಮ ದೈನಂದಿನ ಜೀವನದಲ್ಲಿ ಭಕ್ತಾದಿಗಳು ಅನುಸರಿಸಬೇಕಾದ ಕ್ರಿಯಾತ್ಮಕ ಸೂತ್ರಗಳನ್ನು ಸಂಯೋಜಿಸಿಕೊಡುವ ಪ್ರಯತ್ನವನ್ನು ಲೇಖಕನು ಇಲ್ಲಿ ಮಾಡಿದ್ದಾನೆ. ಕ್ರೈಸ್ತ ಮನೋದೃಷ್ಟಿ ಮತ್ತು ನಡೆನುಡಿಗಳನ್ನು ಕುರಿತ ಕೆಲವು ಹೇಳಿಕೆಗಳು ಹಾಗೂ ಹೋಲಿಕೆಗಳು ಸ್ವಾರಸ್ಯವಾಗಿವೆ. ಬಡತನ, ಸಿರಿತನ, ಪಾಪ, ಪ್ರಲೋಭನೆ, ಸನ್ನಡತೆ, ದುರ್ನಡತೆ, ವಿಶ್ವಾಸ, ಸತ್ಕಾರ್ಯ, ನಾಲಿಗೆಯ ಸದುಪಯೋಗ, ಜಾಣ್ಮೆ, ಜಗಳ, ಗರ್ವ, ನಮ್ರತೆ, ತನ್ನನ್ನೇ ಕೊಚ್ಚಿಕೊಂಡು ಪರರನ್ನು ತುಚ್ಛೀಕರಿಸುವ ಚಟ, ತಾಳ್ಮೆ, ಪ್ರಾರ್ಥನೆ ಇವುಗಳ ಬಗ್ಗೆ ಸರ್ವರಿಗೂ ಮನವರಿಕೆ ಆಗುವಂಥ ಸಂಕ್ಷಿಪ್ತ ವಿವರಣೆ ಇದರಲ್ಲಿದೆ.

ಕ್ರೈಸ್ತಧರ್ಮದಲ್ಲಿ ವಿಶ್ವಾಸವು ಪ್ರಾಮುಖ್ಯವಾದುದೇನೋ ನಿಜ. ಆದರೆ ವಿಶ್ವಾಸವನ್ನು ಸತ್ಕಾರ್ಯಗಳಿಂದ ಸಚೇತನಗೊಳಿಸದಿದ್ದರೆ ಅದು ಸತ್ತ ವಿಶ್ವಾಸವೇ ಎಂಬ ಅಂಶವನ್ನು ಲೇಖಕನು ಒತ್ತಿ ಹೇಳುತ್ತಾನೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 |
| ವಿಶ್ವಾಸ ಮತ್ತು ಜ್ಞಾನ | – | 1.2 – 1.8 |
| ಬಡತನ ಮತ್ತು ಸಿರಿತನ | – | 1.9 – 1.11 |
| ಪರಿಶೋಧನೆ ತಮ್ಮು ಪ್ರಲೋಭನೆ | – | 1.12 – 1.18 |
| ಲಾಲನೆ ಮತ್ತು ಪಾಲನೆ | – | 1.19 – 1.27 |
| ಪಕ್ಷಪಾತದ ಬಗ್ಗೆ ಎಚ್ಚರಿಕೆ | – | 2.1 – 2.13 |
| ವಿಶ್ವಾಸ ಮತ್ತು ಸತ್ಕಾರ್ಯಗಳು | – | 2.14 – 2.26 |
| ನಾಲಿಗೆಯ ಸದುಪಯೋಗ | – | 3.1 – 3.18 |
| ವಿಶ್ವದಲ್ಲಿ ಕ್ರೈಸ್ತಭಕ್ತರು | – | 4.1 – 5.6 |
| ಇತರ ಬುದ್ಧಿವಾದಗಳು | – | 5.7 – 5.20 |


**ಪೀಠಿಕೆ**

**1** ಜಗದಾದ್ಯಂತ ಚದರಿರುವ ಇಸ್ರಯೇಲಿನ ಹನ್ನೆರಡು ಕುಲದವರಿಗೆ – ದೇವರ ಹಾಗೂ ಪ್ರಭು ಯೇಸುಕ್ರಿಸ್ತರ ದಾಸನಾದ ಯಕೋಬನ ಶುಭಾಶಯಗಳು.

**ಜ್ಞಾನಕ್ಕಿಂತ ವಿಶ್ವಾಸವೇ ಶ್ರೇಷ್ಠ**

2 ನನ್ನ ಪ್ರಿಯ ಸಹೋದರರೇ, ನಿಮಗೆ ವಿವಿಧ ಸಂಕಟ ಶೋಧನೆಗಳು ಬಂದೊದಗಿದಾಗ
ಅವುಗಳನ್ನು ಸಂತೋಷದಿಂದ ಸಹಿಸಿಕೊಳ್ಳಿ. 3ಇವು ನಿಮ್ಮ ವಿಶ್ವಾಸವನ್ನು ಒರೆಗೆ ಹಚ್ಚಿ ನಿಮ್ಮನ್ನು
ದೃಢಪಡಿಸುತ್ತೇವೆ; ನಿಮ್ಮನ್ನು ಸಹನಶೀಲರನ್ನಾಗಿ ಮಾಡುತ್ತವೆ. 4ಈ ಸಹನೆ ಸಿದ್ಧಿಗೆ ಬಂದಾಗ ನೀವು ಯಾವ
ಕುಂದುಕೊರತೆ ಇಲ್ಲದೆ, ಪರಿಪೂರ್ಣರೂ ಸರ್ವಗುಣ ಸಂಪನ್ನರೂ ಆಗುತ್ತೀರಿ. 5ನಿಮ್ಮಲ್ಲಿ ಯಾರಿಗಾದರೂ
ಜ್ಞಾನದ ಕೊರತೆಯಿದ್ದರೆ ಅಂಥವನು ದೇವರಲ್ಲಿ ಬೇಡಿಕೊಳ್ಳಲಿ. ಯಾರನ್ನೂ ತಿರಸ್ಕರಿಸದೆ ಎಲ್ಲರಿಗೂ

ಯಥೇಚ್ಛವಾಗಿ ನೀಡುವ ದೇವರು, ಅವನಿಗೆ ಜ್ಞಾನವನ್ನು ದಯಪಾಲಿಸುತ್ತಾರೆ. [6]ಆದರೆ ಬೇಡುವವನು ವಿಶ್ವಾಸದಿಂದ ಬೇಡಲಿ. ಸಂಶಯಕ್ಕೆ ಎಡೆಕೊಡದಿರಲಿ. ಸಂಶಯಕ್ಕೀಡಾಗುವವನ ಪರಿಸ್ಥಿತಿಯಾದರೋ ಬಿರುಗಾಳಿಯ ಬಡಿತಕ್ಕೆ ಸಿಕ್ಕಿದ ಸಮುದ್ರದ ಅಲೆಯಂತೆ ತುಯ್ದಾಡುತ್ತಿರುತ್ತದೆ. [7–8]ಅಂಥವನು ಚಂಚಲಚಿತ್ತನು. ಆಚಾರವಿಚಾರಗಳಲ್ಲಿ ಅಸ್ಥಿರ ಮನಸ್ಸುಳ್ಳವನು. ಆದ್ದರಿಂದ ಅವನು ಪ್ರಭುವಿನಿಂದ ಏನನ್ನಾದರೂ ಪಡೆಯುತ್ತೇನೆಂದು ಭಾವಿಸದಿರಲಿ.

**ಬಡತನವೇ ಭಾಗ್ಯ**

9 ದೀನದಲಿತನಾದ ಸಹೋದರನು, ದೇವರು ತನ್ನನ್ನು ಉನ್ನತ ಸ್ಥಿತಿಗೆ ಏರಿಸಿದಾಗ ಅನಂದಿಸಲಿ. [10]ಅಂತೆಯೇ ಧನಿಕನಾದ ಸಹೋದರನು, ದೇವರು ತನ್ನನ್ನು ದೀನಸ್ಥಿತಿಗೆ ಇಳಿಸಿದಾಗ ಆನಂದಿಸಲಿ. [11]ಏಕೆಂದರೆ, ಧನಿಕರು ಹುಲ್ಲಿನ ಹೂವಿನಂತೆ ಗತಿಸಿ ಹೋಗುತ್ತಾರೆ. ಸೂರ್ಯನ ಸುಡು ಬಿಸಿಲಿಗೆ ಹುಲ್ಲು ಒಣಗಿಹೋಗುತ್ತದೆ, ಅದರ ಹೂವು ಉದುರಿ ಹೋಗುವುದು, ಅದರ ಅಂದ ಚೆಂದವೂ ಹಾಳಾಗಿ ಹೋಗುತ್ತದೆ. ಅಂತೆಯೇ ಧನಿಕನು ತನ್ನ ವ್ಯವಹಾರಗಳಲ್ಲಿಯೇ ಕುಂದಿ ಹೋಗುತ್ತಾನೆ.

**ತಾಳಿದವನು ಬಾಳಿಯಾನು**

12 ಸಂಕಟ ಶೋಧನೆಗಳನ್ನು ತಾಳ್ಮೆಯಿಂದ ಸಹಿಸಿಕೊಳ್ಳುವವನೇ ಧನ್ಯನು. ಅವನು ಪರಿಶೋಧನೆಯಲ್ಲಿ ಯಶಸ್ವಿಯಾದ ಮೇಲೆ ಸಜ್ಜೀವವೆಂಬ ಜಯಮಾಲೆಯನ್ನು ಪಡೆಯುತ್ತಾನೆ. ದೇವರು ತಮ್ಮನ್ನು ಪ್ರೀತಿಸುವವರಿಗೆ ಇದನ್ನು ಕಾದಿರಿಸಿರುತ್ತಾರೆ. [13]ಪಾಪಪ್ರಲೋಭನೆಗೆ ಒಳಗಾದಾಗ, "ಈ ಪ್ರಲೋಭನೆಗಳು ದೇವರಿಂದಲೇ ಬಂದವು," ಎಂದು ಯಾರೂ ಹೇಳದಿರಲಿ. ಏಕೆಂದರೆ, ದೇವರು ಸ್ವತಃ ಪಾಪಪ್ರಲೋಭನೆಗೆ ಗುರಿಯಾಗುವುದಿಲ್ಲ ಮತ್ತು ಯಾರನ್ನೂ ಅಂಥ ಪ್ರಲೋಭನೆಗೆ ಗುರಿಪಡಿಸುವುದಿಲ್ಲ. [14]ಮಾನವನು ಪ್ರಲೋಭನೆಗೆ ಒಳಗಾಗುವುದು ತನ್ನ ದುರಿಚ್ಛೆಯಿಂದಲೇ. ಅದು ಅವನನ್ನು ಆಕರ್ಷಿಸಿ ಮರುಳುಗೊಳಿಸುತ್ತದೆ. [15]ದುರಿಚ್ಛೆ ಗರ್ಭಧರಿಸಿ ಪಾಪಕ್ಕೆ ಜನ್ಮವೀಯುತ್ತದೆ; ಪಾಪವು ಪೂರ್ತಿಯಾಗಿ ಬೆಳೆದು ಮರಣವನ್ನು ಹಡೆಯುತ್ತದೆ.

16 ಪ್ರಿಯ ಸಹೋದರರೇ, ಮೋಸಹೋಗಬೇಡಿ. [17]ಎಲ್ಲಾ ಯೋಗ್ಯ ವರಗಳೂ ಉತ್ತಮಕೊಡುಗೆಗಳೂ ಬರುವುದು ಮೇಲಿನಿಂದಲೇ. ಜ್ಯೋತಿರ್ಮಂಡಲವನ್ನು ಉಂಟುಮಾಡಿದ ದೇವರೇ ಅವುಗಳ ಮೂಲದಾತರು. ಅವರಲ್ಲಿ ಚಂಚಲತೆ ಇಲ್ಲ, ಮಬ್ಬು ಮುಸುಕಿನ ಛಾಯೆಯೂ ಇಲ್ಲ. [18]ಸೃಷ್ಟಿಗಳಲ್ಲೆಲ್ಲಾ ನಾವು ಪ್ರಥಮ ಫಲವಾಗುವಂತೆ ದೇವರು ತಮ್ಮ ಸುಚಿತ್ತದ ಪ್ರಕಾರ ಸತ್ಯವಾಕ್ಯದ ಮೂಲಕ ನಮಗೆ ಜೀವವಿತ್ತರು.

**ಆಲಿಸಲೂ ಬೇಕು, ಪಾಲಿಸಲೂ ಬೇಕು**

19 ಸಹೋದರರೇ, ಇದನ್ನು ನೆನಪಿನಲ್ಲಿಡಿ; ನಿಮ್ಮಲ್ಲಿ ಪ್ರತಿಯೊಬ್ಬನು ಆಲಿಸುವುದರಲ್ಲಿ ಚುರುಕಾಗಿ, ಮಾತನಾಡುವುದರಲ್ಲಿ ದುಡುಕದೆ, ಸಿಟ್ಟುಗೊಳ್ಳುವುದರಲ್ಲಿ ಸಾವಧಾನವಾಗಿ ಇರಲಿ. [20–21]ಮಾನವನ ಕೋಪ ದೇವನೀತಿಗೆ ಧಕ್ಕೆ ! ಆದುದರಿಂದ ನಿಮ್ಮಲ್ಲಿರುವ ಎಲ್ಲಾ ನೀಚತನವನ್ನು ಮತ್ತು ಬೆಳೆಯುತ್ತಿರುವ ದುಷ್ಟತನವನ್ನು ಕಿತ್ತೊಗೆಯಿರಿ. ನಿಮ್ಮ ಹೃದಯದಲ್ಲಿ ದೇವರು ನೆಟ್ಟಿರುವ ವಾಕ್ಯವನ್ನು ನಮ್ರತೆಯಿಂದ ಪರಿಗ್ರಹಿಸಿರಿ. ಇದು ನಿಮ್ಮ ಜೀವೋದ್ಧಾರ ಮಾಡಬಲ್ಲುದು.

22 ದೇವರ ವಾಕ್ಯವನ್ನು ಕಿವಿಯಿಂದ ಕೇಳಿದರೆ ಸಾಕೆಂದು ತಿಳಿದು ಮರುಳಾಗದಿರಿ. ಆ ವಾಕ್ಯವನ್ನು ಅನುಸರಿಸಿ ನಡೆಯುವವರಾಗಿರಿ. [23]ದೇವರ ವಾಕ್ಯವನ್ನು ಕೇಳಿ ಅದರಂತೆ ನಡೆಯದವನು ಕನ್ನಡಿಯಲ್ಲಿ ತನ್ನ ಸಹಜ ಮುಖವನ್ನು ನೋಡಿ, [24]ಮರುಕ್ಷಣವೇ ತಾನು ಹೇಗಿದ್ದೇನೆಂದು ಮರೆತುಬಿಡುವವನಿಗೆ ಸಮಾನನು. [25]ಆದರೆ ನಮಗೆ ವಿಮೋಚನೆಯನ್ನು ತರುವ ಸರ್ವೋತ್ತಮ ಧರ್ಮಶಾಸ್ತ್ರವನ್ನು ಲಕ್ಷ್ಯವಿಟ್ಟು ನೋಡಿ ಅದರಲ್ಲೇ ಧ್ಯಾನಾಸಕ್ತನಾಗಿರುವವನು ಅದನ್ನು ಮರೆಯುವುದಿಲ್ಲ. ಅವನು ಕೇಳುವವನು ಮಾತ್ರ ಆಗಿರದೆ, ವಾಕ್ಯದ ಪ್ರಕಾರ ನಡೆಯುವವನೂ ಆಗಿರುತ್ತಾನೆ. ಇಂಥವನು ಭಾಗ್ಯವಂತನು !

26 ತಾನು ಸದ್ಭಕ್ತನೆಂದು ಭಾವಿಸಿಕೊಳ್ಳುವ ಯಾವನಾದರೂ ತನ್ನ ನಾಲಿಗೆಗೆ ಕಡಿವಾಣ ಹಾಕದಿದ್ದರೆ, ಅಂಥವನ ಭಕ್ತಿ ವ್ಯರ್ಥ. ಅವನು ತನ್ನನ್ನೇ ವಂಚಿಸಿಕೊಳ್ಳುತ್ತಾನಷ್ಟೆ. [27]ಕಷ್ಟಸಂಕಟಗಳಲ್ಲಿರುವ ಅನಾಥರಿಗೂ ವಿಧವೆಯರಿಗೂ ನೆರವಾಗುವುದು ಹಾಗೂ ಪ್ರಾಪಂಚಿಕ ಮಲಿನತೆಯಿಂದ ದೂರವಿರುವುದು – ನಮ್ಮ ತಂದೆಯಾದ ದೇವರ ಮುಂದೆ ನಿಷ್ಕಳಂಕವಾದ ಮತ್ತು ನಿರ್ಮಲವಾದ ಧರ್ಮವೆನಿಸುತ್ತದೆ.

## ದಯೆಯೇ ಧರ್ಮದ ಮುಕುಟ

**2** ನನ್ನ ಸಹೋದರರೇ, ಮಹಿಮಾನ್ವಿತ ಪ್ರಭು ಯೇಸುಕ್ರಿಸ್ತರಲ್ಲಿ ವಿಶ್ವಾಸವಿಟ್ಟಿರುವ ನೀವು ಪಕ್ಷಪಾತ
ಮಾಡಲೇಬಾರದು. [2]ಉದಾಹರಣೆಗೆ: ಇಬ್ಬರು ನಿಮ್ಮ ಪ್ರಾರ್ಥನಾಲಯಕ್ಕೆ ಬಂದರೆಂದು ಇಟ್ಟುಕೊಳ್ಳಿ. ಅವರಲ್ಲಿ
ಒಬ್ಬನು ಚಿನ್ನದುಂಗುರವನ್ನು ತೊಟ್ಟು, ಸೊಗಸಾದ ಉಡುಪನ್ನು ಧರಿಸಿದವನು. ಮತ್ತೊಬ್ಬನು ಹರಕು
ಬಟ್ಟೆಯನ್ನು ಉಟ್ಟ ಬಡವನು. [3]ಆಗ, ನೀವು ಸೊಗಸಾದ ಉಡುಪನ್ನು ಧರಿಸಿದವನಿಗೆ ಗೌರವದಿಂದ, "ಬನ್ನಿ
ಸ್ವಾಮಿ ಬನ್ನಿ, ದಯವಿಟ್ಟು ಈ ಪೀಠವನ್ನು ಅಲಂಕರಿಸಿ," ಎನ್ನುತ್ತೀರಿ. ಬಡವನಿಗೆ "ನೀನು ಅಲ್ಲಿಯೇ
ನಿಂತುಕೋ, ಇಲ್ಲವೇ ಕೆಳಗೆ, ನನ್ನ ಕಾಲ ಬಳಿ ಕುಳಿತುಕೋ," ಎನ್ನುತ್ತೀರಿ. ಹೀಗಿರಲು [4]ನೀವು ನಿಮ್ಮಲ್ಲೇ
ಭೇದಭಾವ ಮಾಡುತ್ತೀರಿ; ಅಲ್ಲದೆ ನೀವು ಮಾಡುವ ಈ ತೀರ್ಪು ದುರುದ್ದೇಶದಿಂದ ಕೂಡಿರುತ್ತದೆ.
5 ನನ್ನ ಪ್ರಿಯ ಸಹೋದರರೇ, ಪ್ರಪಂಚದ ದೃಷ್ಟಿಗೆ ಬಡವರಾಗಿ ಕಾಣುವವರನ್ನು ವಿಶ್ವಾಸದಲ್ಲಿ
ಸಿರಿವಂತರನ್ನಾಗಿಸಲು ದೇವರು ಆರಿಸಿಕೊಳ್ಳಲಿಲ್ಲವೇ? ತಮ್ಮನ್ನು ಪ್ರೀತಿಸುವವರು ಸ್ವರ್ಗಸಾಮ್ರಾಜ್ಯಕ್ಕೆ
ಬಾಧ್ಯಸ್ಥರೆಂದು ದೇವರೇ ವಾಗ್ದಾನ ಮಾಡಿಲ್ಲವೇ? [6]ಹೀಗಿದ್ದರೂ ನೀವು ಬಡವನನ್ನು ಅವಮಾನಕ್ಕೆ
ಈಡುಮಾಡಿದಿರಿ. ನಿಮ್ಮನ್ನು ತುಳಿದು ಹಿಂಸಿಸುವವರು ಮತ್ತು ನಿಮ್ಮನ್ನು ನ್ಯಾಯಾಲಯಕ್ಕೆ ಎಳೆಯುವವರು
ಸಿರಿವಂತರೇ ಅಲ್ಲವೇ? [7]ನೀವು ಯಾರಿಗೆ ಶರಣರಾಗಿದ್ದೀರೋ ಅವರ ಶ್ರೇಷ್ಠ ನಾಮವನ್ನು ದೂಷಿಸುವವರೂ
ಸಿರಿವಂತರೇ ಅಲ್ಲವೇ?
8 'ನಿನ್ನನ್ನು ನೀನು ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವನನ್ನು ಪ್ರೀತಿಸು' ಎಂದು ಪವಿತ್ರ ಗ್ರಂಥದಲ್ಲಿ
ಬರೆದಿದೆ. ಈ ರಾಜಾಜ್ಞೆಯನ್ನು ಕೈಗೊಂಡು ನಡೆಯುತ್ತಿದ್ದರೆ ಅದು ಒಳ್ಳೆಯದು. [9]ಅದನ್ನು ಬಿಟ್ಟು ಪಕ್ಷಪಾತ
ಮಾಡಿದರೆ ನೀವು ಪಾಪ ಮಾಡುತ್ತೀರಿ ಮತ್ತು ಧರ್ಮಶಾಸ್ತ್ರ ನಿಮ್ಮನ್ನು ಅಪರಾಧಿಗಳೆಂದು ನಿರ್ಣಯಿಸುತ್ತದೆ.
[10]ಒಬ್ಬನು ಇಡೀ ಧರ್ಮಶಾಸ್ತ್ರವನ್ನೇ ಕೈಗೊಂಡು ಒಂದೇ ಒಂದು ನಿಯಮವನ್ನು ಮೀರಿನಡೆದರೂ ಅವನು
ಇಡೀ ಧರ್ಮಶಾಸ್ತ್ರವನ್ನೇ ಮೀರಿ ನಡೆದಂತಾಗುತ್ತದೆ. [11]ಏಕೆಂದರೆ, 'ವ್ಯಭಿಚಾರ ಮಾಡಬೇಡ' ಎಂದು ಹೇಳಿದ
ದೇವರೇ, 'ಕೊಲ್ಲಬೇಡ' ಎಂದೂ ಹೇಳಿದ್ದಾರೆ. ನೀನು ವ್ಯಭಿಚಾರ ಮಾಡದಿದ್ದರೂ ಕೊಲೆ ಮಾಡುವವನಾದರೆ
ಧರ್ಮಶಾಸ್ತ್ರವನ್ನೇ ಮೀರಿದಂತಾಗುತ್ತದೆ. [12]ವಿಮೋಚನೆಯನ್ನೀಯುವ ಧರ್ಮಶಾಸ್ತ್ರದ ನ್ಯಾಯತೀರ್ಪಿಗೆ
ಗುರಿಯಾಗುವಿರಿ ಎಂದು ತಿಳಿದು ನೀವು ನಡೆಯಲ್ಲೂ ನುಡಿಯಲ್ಲೂ ಯೋಗ್ಯರಾಗಿ ಬಾಳಿ.
[13]ದಯೆತೋರದವನಿಗೆ, ದಯೆದಾಕ್ಷಿಣ್ಯವಿಲ್ಲದ ನ್ಯಾಯತೀರ್ಪು ಕಾದಿರುತ್ತದೆ. ನ್ಯಾಯಕ್ಕೂ ಮಿಗಿಲಾಗಿ
ವಿಜೃಂಭಿಸುವುದು ದಯೆಯೇ.

## ಸತ್ಕಾರ್ಯಗಳಿಲ್ಲದ ವಿಶ್ವಾಸ ಸತ್ತ ವಿಶ್ವಾಸ

14 ಸಹೋದರರೇ, ಒಬ್ಬನು ತನಗೆ ವಿಶ್ವಾಸ ಇದೆಯೆಂದು ಕೊಚ್ಚಿಕೊಂಡು ಅದನ್ನು ಕಾರ್ಯತಃ
ವ್ಯಕ್ತಪಡಿಸದಿದ್ದರೆ ಅದರಿಂದ ಪ್ರಯೋಜನ ಏನು? ಅಂಥ ವಿಶ್ವಾಸ ಅವನನ್ನು ಉದ್ಧಾರ ಮಾಡಬಲ್ಲುದೇ?
[15–16]ಒಂದು ವೇಳೆ ಒಬ್ಬ ಸಹೋದರನಾಗಲಿ, ಸಹೋದರಿಯಾಗಲಿ ದಿನನಿತ್ಯ ಊಟಬಟ್ಟೆಗಿಲ್ಲದೆ ಇರುವಾಗ,
ನಿಮ್ಮಲ್ಲಿ ಯಾರಾದರು ಅವರಿಗೆ ಅಗತ್ಯವಾದುದನ್ನು ನೀಡದೆ, 'ಹೋಗು, ಸುಖವಾಗಿ ಬಾಳು, ಚಳಿ
ಕಾಯಿಸಿಕೊ, ಹೊಟ್ಟೆ ತುಂಬಾ ತಿನ್ನು,' ಎಂದು ಬರೀ ಬಾಯಿಮಾತಿನಲ್ಲಿ ಉಪಚರಿಸಿದರೆ ಅದರಿಂದಾದ
ಪ್ರಯೋಜನವೇನು? [17]ಸತ್ಕ್ರಿಯೆಗಳಿಲ್ಲದ ವಿಶ್ವಾಸ ಸತ್ತ ವಿಶ್ವಾಸವೇ ಸರಿ.

18 ಒಬ್ಬನು, "ನಿನ್ನಲ್ಲಿ ವಿಶ್ವಾಸವಿದೆ, ನನ್ನಲ್ಲಿ ಸತ್ಕ್ರಿಯೆಗಳಿವೆ," ಎನ್ನಬಹುದು. ಅಂಥವನಿಗೆ,
"ಸತ್ಕ್ರಿಯೆಗಳಿಲ್ಲದ ನಿನ್ನ ವಿಶ್ವಾಸವನ್ನು ನನಗೆ ತೋರಿಸು; ನನ್ನ ಸತ್ಕಾರ್ಯಗಳ ಮೂಲಕ ನನ್ನ ವಿಶ್ವಾಸವನ್ನು
ನಿನಗೆ ವ್ಯಕ್ತಪಡಿಸುತ್ತೇನೆ," ಎಂದು ಉತ್ತರಿಸಬಹುದು. 19ದೇವರು ಒಬ್ಬರೇ ಎಂದು ನೀವು ನಂಬುತ್ತೀರಿ. ಈ
ನಂಬಿಕೆ ಒಳ್ಳೆಯದೇ. ಆದರೆ ದೆವ್ವಗಳೂ ನಂಬುತ್ತವೆ; ಹೆದರಿ ನಡುಗುತ್ತವೆ. 20ಮತಿಹೀನನೇ, ಸತ್ಕ್ರಿಯೆಗಳಿಲ್ಲದ
ವಿಶ್ವಾಸ ಗೊಡ್ಡು ವಿಶ್ವಾಸ ಎಂಬುದಕ್ಕೆ ದೃಷ್ಟಾಂತ ಬೇಕೇ? 21ನಮ್ಮ ಪಿತಾಮಹ ಅಬ್ರಹಾಮನು ದೇವರೊಂದಿಗೆ
ಸತ್ಸಂಬಂಧವನ್ನು ಪಡೆದುದ್ದಾದರೂ ಹೇಗೆ? ತನ್ನ ಮಗ ಇಸಾಕನನ್ನು ದೇವರಿಗೆ ಬಲಿಯಾಗಿ ಸಮರ್ಪಿಸಿದ
ಸತ್ಕ್ರಿಯೆಯಿಂದಲ್ಲವೇ? ವಿಶ್ವಾಸವು ಸತ್ಕ್ರಿಯೆಗಳಿಂದ ಸಚೇತನಗೊಂಡಿತು. 22ಆತನ ಸತ್ಕ್ರಿಯೆಗಳಿಂದಲೇ
ವಿಶ್ವಾಸವು ಸಿದ್ಧಿಗೆ ಬಂದಿತು ಎಂಬುದನ್ನು ನಾವು ನೋಡುತ್ತೇವೆ. 23ಆದುದರಿಂದಲೇ, "ಅಬ್ರಹಾಮನು
ದೇವರಲ್ಲಿ ವಿಶ್ವಾಸ ಇಟ್ಟನು. ದೇವರು ಆತನನ್ನು ತಮ್ಮ ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿಸಿದರು,"
ಎಂದು ಪವಿತ್ರಗ್ರಂಥದಲ್ಲಿ ಬರೆದಿರುವ ಮಾತು ನೆರವೇರಿತು. ಅಬ್ರಹಾಮನು ದೇವರ ಮಿತ್ರನೆನಿಸಿಕೊಂಡನು.
24ಮಾನವನು ದೇವರೊಡನೆ ಸತ್ಸಂಬಂಧವನ್ನು ಪಡೆಯುವುದು ವಿಶ್ವಾಸದಿಂದ ಮಾತ್ರವಲ್ಲ, ವಿಶ್ವಾಸವು
ಸತ್ಕ್ರಿಯೆಗಳೊಡನೆ ಬೆರೆತಾಗ ಮಾತ್ರ ಎಂಬುದು ನಿಮಗೆ ತಿಳಿದಿರಲಿ.

25 ಇದೇ ರೀತಿಯಾಗಿ ರಹಾಬಳೆಂಬ ಜಾರಿಣಿ ಗೂಢಚಾರರನ್ನು ತನ್ನ ಮನೆಗೆ ಸೇರಿಸಿಕೊಂಡು
ಬೇರೆ ದಾರಿಯಿಂದ ಅವರನ್ನು ಸಾಗಕಳುಹಿಸಿದಳು. ಈ ಸತ್ಕ್ರಿಯೆಯಿಂದಲೇ ದೇವರೊಡನೆ ನೀತಿಯುತ
ಸಂಬಂಧವನ್ನು ಪಡೆದಳು.

26 ಆತ್ಮವಿಲ್ಲದ ದೇಹವು ಸತ್ತದ್ದು ಸತ್ಕ್ರಿಯೆಗಳಿಲ್ಲದ ವಿಶ್ವಾಸವೂ ಸತ್ತದ್ದೇ ಸರಿ.

## ನೀಚಬುದ್ಧಿಯ ನಾಲಿಗೆ

**3** ಸಹೋದರರೇ, ಎಲ್ಲರೂ ಬೋಧಕರಾಗಲು ಆತುರಪಡಬೇಡಿ. ಬೋಧಕರಾದ ನಾವು ಇತರರಿಗಿಂತಲೂ
ತೀವ್ರವಾದ ನ್ಯಾಯವಿಚಾರಣೆಗೆ ಗುರಿಯಾಗುತ್ತೇವೆ. 2ನಾವೆಲ್ಲರೂ ಎಷ್ಟೋ ವಿಷಯಗಳಲ್ಲಿ ತಪ್ಪು
ಮಾಡುವುದುಂಟು. ತನ್ನ ಮಾತಿನಲ್ಲಿ ತಪ್ಪುಮಾಡದೆ ಪೂರ್ತಿಯಾಗಿ ತನ್ನನ್ನೇ ಸ್ವಾಧೀನದಲ್ಲಿ ಇಟ್ಟುಕೊಳ್ಳುವ
ವ್ಯಕ್ತಿ ಸಿದ್ಧಪುರುಷನೇ ಹೌದು. 3ಕುದುರೆಗಳನ್ನು ಗಮನಿಸಿರಿ. ಅವುಗಳ ಬಾಯಿಗೆ ಹಾಕುವ ಚಿಕ್ಕ
ಕಡಿವಾಣದಿಂದ ನಮಗೆ ಇಷ್ಟ ಬಂದ ಕಡೆಗೆ ಅವುಗಳನ್ನು ನಡೆಸುತ್ತೇವೆ. 4ಅಂತೆಯೇ, ಹಡಗು ಎಷ್ಟೇ
ದೊಡ್ಡದಿರಲಿ, ಎಂತಹ ಬಿರುಗಾಳಿಯ ಬಡಿತಕ್ಕೇ ಸಿಕ್ಕಿರಲಿ, ಕೇವಲ ಒಂದು ಚಿಕ್ಕ ಚುಕ್ಕಾಣಿಯಿಂದ ನಾವಿಕನು
ತನಗೆ ಇಷ್ಟ ಬಂದ ಕಡೆಗೆ ಅದನ್ನು ತಿರುಗಿಸುತ್ತಾನೆ. 5ನಾಲಿಗೆಯೂ ಹಾಗೆಯೇ. ಇದು ಶರೀರದ ಸಣ್ಣ
ಅಂಗವಾಗಿದ್ದರೂ ಬಡಾಯಿ ಕೊಚ್ಚುವುದು ಬಹಳ.

ಒಂದು ಸಣ್ಣ ಕಿಡಿಯು ದೊಡ್ಡ ಕಾಡನ್ನೇ ಸುಡಬಲ್ಲದು. 6ನಾಲಿಗೆಯು ಆ ಬೆಂಕಿಯ ಕಿಡಿಯಂತೆ.
ಅದು ಅಧರ್ಮಲೋಕದ ಪ್ರತೀಕ. ಅಂಗಾಂಗಗಳ ನಡುವೆ ಇದ್ದು ಇಡೀ ಶರೀರವನ್ನು ಮಲಿನಗೊಳಿಸುತ್ತದೆ.
ನರಕಾಗ್ನಿಯಿಂದ ಹೊತ್ತಿಕೊಂಡು ಅದು ಬಾಳಿನ ಚಕ್ರಕ್ಕೇ ಬೆಂಕಿಯನ್ನು ಹಚ್ಚುತ್ತದೆ. 7ಸಕಲ ಜಾತಿಯ
ಪ್ರಾಣಿಪಕ್ಷಿಗಳನ್ನೂ ಹರಿದಾಡುವ ಜಂತುಗಳನ್ನೂ ಜಲಜೀವಿಗಳನ್ನೂ ಮಾನವ ಪಳಗಿಸಬಲ್ಲನು;
ಪಳಗಿಸಿಯೂ ಇದ್ದಾನೆ. 8ಆದರೆ ನಾಲಿಗೆಯನ್ನಾದರೋ ಹತೋಟಿಗೆ ತರಲು ಯಾರಿಗೂ ಸಾಧ್ಯವಿಲ್ಲ. ಅದು
ಸತತ ಕೇಡನ್ನುಂಟು ಮಾಡುವ ಕಿಡಿ; ಮೃತ್ಯುಮಾರಕ ವಿಷಕೊಂಡಿ. 9ಪ್ರಭುವನ್ನೂ ಪರಮ ಪಿತನನ್ನೂ
ಸ್ತುತಿಸುವುದು ಅದೇ ನಾಲಿಗೆಯೇ; ದೇವಸ್ವರೂಪದಲ್ಲಿ ಸೃಷ್ಟಿಸಲಾದ ಮಾನವನನ್ನು ಶಪಿಸುವುದೂ ಅದೇ
ನಾಲಿಗೆಯೇ. 10ಸ್ತುತಿ ಶಾಪಗಳೆರಡೂ ಒಂದೇ ಬಾಯಿಂದ ಹೊರಡುತ್ತವೆ. ಪ್ರಿಯ ಸಹೋದರರೇ, ಇದು
ತರವಲ್ಲ. 11ಒಂದೇ ಬುಗ್ಗೆಯಿಂದ ಸಿಹಿನೀರು, ಸೌಳು ನೀರು–ಎರಡೂ ಬರುವುದುಂಟೇ? 12ಅಂಜೂರದ
ಮರ ಓಲಿವ್ ಹಣ್ಣನ್ನು ಕೊಡುವುದುಂಟೇ? ದ್ರಾಕ್ಷಿಯ ಬಳ್ಳಿಯಲ್ಲಿ ಅಂಜೂರ ಸಿಕ್ಕೀತೇ? ಎಂದಿಗೂ ಇಲ್ಲ.
ಅಂತೆಯೇ, ಸೌಳು ನೀರಿನ ಒರತೆಯಿಂದ ಸಿಹಿನೀರು ಬರುವುದಿಲ್ಲ.

**ಜ್ಞಾನದ ಗುಣ ನಡತೆಯಲ್ಲಿ**

13 ನಿಮ್ಮಲ್ಲಿ ಯಾರಾದರೂ ಜ್ಞಾನಿಯೂ ವಿವೇಕಿಯೂ ಆದವನು ಇದ್ದಾನೋ? ಅಂಥವನು ಜ್ಞಾನದ ಲಕ್ಷಣವಾಗಿರುವ ವಿನಯಶೀಲತೆಯನ್ನು ತನ್ನ ನಡೆನುಡಿಯಲ್ಲಿ ತೋರ್ಪಡಿಸಲಿ. 14ನಿಮ್ಮ ಹೃದಯದಲ್ಲಿ ಮರ್ಮಮತ್ಸರವೂ ಸ್ವಾರ್ಥಾಭಿಲಾಶೆಯೂ ತುಂಬಿರುವಾಗ ಜ್ಞಾನಿಗಳೆಂದು ಕೊಚ್ಚಿಕೊಳ್ಳಬೇಡಿ; ಸತ್ಯಕ್ಕೆ ವಿರುದ್ಧವಾಗಿ ಸುಳ್ಳಾಡಬೇಡಿ. 15ಅಂಥ ಜ್ಞಾನ ದೇವರಿಂದ ಬಂದ ಜ್ಞಾನವಲ್ಲ; ಅದು ಪ್ರಾಪಂಚಿಕವಾದುದು. ಪ್ರಾಕೃತವಾದುದು, ಪೈಶಾಚಿಕವಾದುದು. 16ಮರ್ಮ ಮತ್ಸರವೂ ಸ್ವಾರ್ಥಾಭಿಲಾಶೆಯೂ ಇರುವ ಕಡೆಗಳಲ್ಲೆಲ್ಲಾ ನಾನಾವಿಧವಾದ ಅಕ್ರಮಗಳೂ ದುಶ್ಚಟಗಳೂ ಇರುತ್ತವೆ. 17ದೇವರಿಂದ ಬರುವ ಜ್ಞಾನವಾದರೋ ಮೊಟ್ಟಮೊದಲನೆಯದಾಗಿ ಪವಿತ್ರವಾದುದು. ಅದು ಶಾಂತಿಸಮಾಧಾನ ಉಳ್ಳದ್ದು. ಸಹನೆ ಸಂಯಮವುಳ್ಳದ್ದು, ನ್ಯಾಯ ಸಮ್ಮತವಾದದ್ದು, ದಯೆದಾಕ್ಷಿಣ್ಯಗಳಿಂದಲೂ ಸತ್ಕಾರ್ಯಗಳಿಂದಲೂ ಫಲಭರಿತವಾದದ್ದು. ವಂಚನೆಯಾಗಲಿ, ಚಂಚಲತೆಯಾಗಲಿ ಅದರಲ್ಲಿ ಇರುವುದಿಲ್ಲ.
18ಸಮಾಧಾನಪಡಿಸುವವರು ಸಮಾಧಾನವೆಂಬ ಬೀಜವನ್ನು ಬಿತ್ತಿ ದೇವರೊಡನೆ ಸತ್ಸಂಬಂಧವೆಂಬ ಫಲವನ್ನು ಕೊಯ್ಯುತ್ತಾರೆ.

**ಲೋಕದೊಡನೆ ಗೆಳೆತನ – ದೇವರೊಡನೆ ಹಗೆತನ**

**4** ನಿಮ್ಮಲ್ಲಿ ಕಲಹ ಕಾದಾಟಗಳು ಉಂಟಾಗುವುದು ಹೇಗೆ? ನಿಮ್ಮ ಇಂದ್ರಿಯಗಳಲ್ಲಿ ಗೊಂದಲವೆಬ್ಬಿಸುವ ದುರಿಚ್ಛೆಗಳಿಂದಲ್ಲವೇ? 2ಪರರ ಆಸ್ತಿಪಾಸ್ತಿಗಳನ್ನು ಬಯಸುತ್ತೀರಿ; ಅವುಗಳು ಸಿಗದೆ ಇದ್ದಾಗ, ನೀವು ಕೊಲೆಮಾಡಲೂ ಹಿಂಜರಿಯುವುದಿಲ್ಲ. ದುರಾಶೆಗಳಿಗೆ ಬಲಿಯಾಗುತ್ತೀರಿ; ಅವುಗಳು ಈಡೇರದಾಗ ಜಗಳವಾಡುತ್ತೀರಿ, ಕಾದಾಡುತ್ತೀರಿ. ನಿಮಗೆ ಬೇಕಾದುದು ನಿಮ್ಮಲ್ಲಿಲ್ಲ. ಏಕೆಂದರೆ, ನೀವು ಅದಕ್ಕಾಗಿ ಬೇಡಿಕೊಳ್ಳಲಿಲ್ಲ. 3ಬೇಡಿಕೊಂಡರೂ ನಿಮಗದು ದೊರಕುವುದಿಲ್ಲ. ಏಕೆಂದರೆ, ನಿಮ್ಮ ಬೇಡಿಕೆ ದುರುದ್ದೇಶದಿಂದ ಕೂಡಿರುತ್ತದೆ. ಭೋಗಾಭಿಲಾಶೆಗಳ ಈಡೇರಿಕೆ ನಿಮ್ಮ ಗುರಿಯಾಗಿರುತ್ತದೆ. 4ವಿಶ್ವಾಸದಲ್ಲಿ ವ್ಯಭಿಚಾರಿಗಳಂತೆ ಬಾಳುವವರೇ, ಲೋಕದೊಡನೆ ಗೆಳೆತನವೆಂದರೆ ದೇವರೊಡನೆ ಹಗೆತನವೆಂಬುದು ನಿಮಗೆ ತಿಳಿಯದೇ? ಲೋಕದೊಡನೆ ಗೆಳೆತನವನ್ನು ಬಯಸುವವನು ದೇವರೊಡನೆ ಹಗೆತನವನ್ನು ಬೆಳೆಸುತ್ತಾನೆ. 5“ದೇವರು ನಮ್ಮಲ್ಲಿ ಇರುವ ಆತ್ಮವನ್ನು ಅತ್ಯಾಸಕ್ತಿಯಿಂದ ಅಪೇಕ್ಷಿಸುತ್ತಾರೆ” ಎಂಬ ಪವಿತ್ರಗ್ರಂಥದ ವಾಕ್ಯವು ಹುರುಳಿಲ್ಲದ್ದೆಂದು ಭಾವಿಸುವಿರಾ? 6ದೇವರು ನಮಗೆ ದಯಪಾಲಿಸುವ ವರಪ್ರಸಾದ ಅತ್ಯಧಿಕವಾದುದು. ಎಂತಲೇ, “ದೇವರು ಗರ್ವಿಷ್ಠರನ್ನು ವಿರೋಧಿಸುತ್ತಾರೆ. ದೀನದಲಿತರಿಗೆ ಕೃಪಾವರವನ್ನು ಅನುಗ್ರಹಿಸುತ್ತಾರೆ,” ಎಂದು ಲಿಖಿತವಾಗಿದೆ.

7 ಆದ್ದರಿಂದ ದೇವರಿಗೆ ಶರಣರಾಗಿ ಬಾಳಿ. ಸೈತಾನನನ್ನು ಎದುರಿಸಿ ನಿಲ್ಲಿ. ಅವನು ನಿಮ್ಮಿಂದ ಪಲಾಯನಗೈಯುವನು. 8ದೇವರ ಸಮೀಪಕ್ಕೆ ಬನ್ನಿ, ಆಗ ಅವರು ನಿಮ್ಮ ಸಮೀಪಕ್ಕೆ ಬರುವರು. ಪಾಪಾತ್ಮರೇ, ನಿಮ್ಮ ಕೈ ಶುದ್ಧವಾಗಿರಲಿ. ಎರಡು ಮನಸ್ಸಿನವರೇ, ನಿಮ್ಮ ಹೃದಯ ನಿರ್ಮಲವಾಗಿರಲಿ. 9ನಿಮ್ಮ ಹೀನಸ್ಥಿತಿಗಾಗಿ ವ್ಯಥೆಪಡಿರಿ, ಕಣ್ಣೀರಿಟ್ಟು ಗೋಳಾಡಿರಿ. ನಗುವುದನ್ನು ಬಿಟ್ಟು ದುಃಖಿಸಿರಿ; ಸಂತೋಷವನ್ನು ಬಿಟ್ಟು ಶೋಕಿಸಿರಿ. 10ಪ್ರಭುವಿನ ಮುಂದೆ ನಮ್ರರಾಗಿರಿ. ಆಗ ಅವರು ನಿಮ್ಮನ್ನು ಉದ್ಧರಿಸುವರು.

11 ಸಹೋದರರೇ, ಒಬ್ಬರನ್ನೊಬ್ಬರು ನಿಂದಿಸಬೇಡಿ. ಯಾರಾದರೂ ತನ್ನ ಸಹೋದರನನ್ನು ನಿಂದಿಸಿದರೆ ಅಥವಾ ಖಂಡಿಸಿದರೆ, ಅಂಥವನು ಧರ್ಮಶಾಸ್ತ್ರವನ್ನೇ ನಿಂದಿಸಿ ಖಂಡಿಸುತ್ತಾನೆ. ನೀನು ಧರ್ಮಶಾಸ್ತ್ರವನ್ನು ಖಂಡಿಸಿದರೆ, ನ್ಯಾಯಾಧಿಪತಿ ಎನಿಸಿಕೊಳ್ಳುವೆಯೇ ಹೊರತು ನೀನು ಅದನ್ನು ಅನುಸರಿಸಿ ನಡೆಯುವವನಾಗುವುದಿಲ್ಲ. 12ನ್ಯಾಯವಿಧಿಗಳನ್ನು ಕೊಟ್ಟವರೂ ನ್ಯಾಯಾಧಿಪತಿಯೂ ಒಬ್ಬರೇ; ಅವರೇ ಉದ್ಧಾರ ಮಾಡುವುದಕ್ಕೂ ವಿನಾಶಗೊಳಿಸುವುದಕ್ಕೂ ಶಕ್ತರು. ಹೀಗಿರುವಲ್ಲಿ, ನಿನ್ನ ನೆರೆಯವನಿಗೆ ತೀರ್ಪುಕೊಡಲು ನೀನು ಯಾರು?

**ಕೊಚ್ಚಿಕೊಳ್ಳುವವನಿಗೆ ಎಚ್ಚರಿಕೆ !**

13 "ಇಂಥಿಂಥ ದಿನ ಇಂಥಿಂಥ ಪಟ್ಟಣಕ್ಕೆ ಹೋಗೋಣ. ಅಲ್ಲಿ ಒಂದು ವರ್ಷ ಇದ್ದು ವ್ಯಾಪಾರ
ಮಾಡೋಣ; ಅತಿಯಾಗಿ ಲಾಭ ಸಂಪಾದಿಸೋಣ," ಎಂದೆಲ್ಲಾ ಆಲೋಚಿಸುವವರೇ, ಈಗ ಕೇಳಿ: ನೀವು
ಇಷ್ಟೆಲ್ಲಾ ಆಲೋಚಿಸಿದರೂ ನಾಳೆ ಏನಾಗುವುದೋ ನಿಮಗೇ ತಿಳಿಯದು. 14ನಿಮ್ಮ ಜೀವಮಾನ ಎಷ್ಟು
ಮಾತ್ರದ್ದು? ಈಗ ಕಾಣಿಸಿಕೊಂಡು ಆಮೇಲೆ ಕಾಣದೆ ಹೋಗುವ ಹೊಗೆಯಂತೆ ಅದು. 15ಆದ್ದರಿಂದ ನೀವು
ಅಂಥ ಮಾತನ್ನು ಬಿಟ್ಟು, "ಪ್ರಭುವಿನ ಚಿತ್ತವಿದ್ದರೆ ನಾವು ಬದುಕಿರುತ್ತೇವೆ, ಇಂಥಿಂಥದ್ದನ್ನು ಮಾಡುತ್ತೇವೆ,"
ಎಂದು ನೀವು ಹೇಳುವುದೇ ಸರಿ. 16ಆದರೆ ನೀವು ಅಹಂಭಾವದಿಂದ ಕೊಚ್ಚಿಕೊಳ್ಳುತ್ತೀರಿ. ಹಾಗೆ
ಕೊಚ್ಚಿಕೊಳ್ಳುವುದು ಸರಿಯಲ್ಲ. 17ಒಬ್ಬನು ಒಳ್ಳೆಯದನ್ನು ಮಾಡಬೇಕೆಂದು ತಿಳಿದಿದ್ದೂ ಅದನ್ನು ಮಾಡದಿದ್ದರೆ
ಅದು ಅವನಿಗೆ ಪಾಪವಾಗಿರುತ್ತದೆ.

**ಕಾರ್ಮಿಕರ ಕೂಗು – ಮಾಲೀಕರ ಸೋಗು**

**5** ಐಶ್ವರ್ಯವಂತರೇ, ಕೇಳಿ: ನಿಮಗೆ ಬರಲಿರುವ ಮಹಾಕಷ್ಟಗಳಿಗಾಗಿ ಕಣ್ಣೀರಿಡಿ, ಗೋಳಾಡಿರಿ. 2ನಿಮ್ಮ
ಐಶ್ವರ್ಯ ನಾಶವಾಗಿದೆ. ನಿಮ್ಮ ಬೆಲೆಬಾಳುವ ಬಟ್ಟೆಗಳಿಗೆ ನುಸಿಹತ್ತಿದೆ. 3ನಿಮ್ಮ ಬೆಳ್ಳಿಬಂಗಾರಕ್ಕೆ ತುಕ್ಕು
ಹಿಡಿದಿದೆ. ಆ ತುಕ್ಕೇ ನಿಮಗೆ ವಿರುದ್ಧ ಸಾಕ್ಷಿಯಾಗಿ ನಿಮ್ಮನ್ನು ಬೆಂಕಿಯಂತೆ ದಹಿಸಿಬಿಡುತ್ತದೆ. ಅಂತ್ಯಕಾಲಕ್ಕಾಗಿ
ನೀವು ಬೆಂಕಿಯನ್ನೇ ಶೇಖರಿಸಿಟ್ಟುಕೊಂಡಿದ್ದೀರಿ. 4ನಿಮ್ಮ ಹೊಲಗಳಲ್ಲಿ ದುಡಿದ ಆಳುಗಳ ಕೂಲಿಯನ್ನು
ಮೋಸದಿಂದ ಹಿಡಿದಿಟ್ಟುಕೊಂಡಿದ್ದೀರಿ. ನೀವು ಕೊಡದ ಕೂಲಿಯೇ ನಿಮಗೆ ವಿರುದ್ಧವಾಗಿ ಕೂಗಿಕೊಳ್ಳುತ್ತಿದೆ.
ಕೂಲಿಯಾಳುಗಳ ಗೋಳಾಟ ಸ್ವರ್ಗಸೇನಾಧೀಶ್ವರನಾದ ಪ್ರಭುವಿನ ಕಿವಿಗೂ ಬಿದ್ದಿದೆ. 5ಲೋಕದಲ್ಲಿ ನೀವು
ಸುಖಭೋಗಿಗಳಾಗಿ ವಿಲಾಸ ಜೀವನ ನಡೆಸಿದ್ದೀರಿ. ವಧೆಯ ದಿನಕ್ಕಾಗಿ ಪಶುಗಳಂತೆ ನಿಮ್ಮನ್ನೇ
ಕೊಬ್ಬಿಸಿಕೊಂಡಿದ್ದೀರಿ. 6ನಿಮ್ಮನ್ನು ವಿರೋಧಿಸಿದ ಸಜ್ಜನನನ್ನು ಖಂಡಿಸಿ ಕೊಲೆಮಾಡಿಸಿದ್ದೀರಿ.

**ಸಹನೆ ಶರಣರ ಭೂಷಣ**

7 ಆದ್ದರಿಂದ ಸಹೋದರರೇ, ಪ್ರಭು ಪುನರಾಗಮಿಸುವವರೆಗೆ ತಾಳ್ಮೆಯಿಂದ ಇರಿ. ರೈತನನ್ನು
ಗಮನಿಸಿರಿ: ತನ್ನ ಹೊಲದಲ್ಲಿ ಉತ್ತಮ ಬೆಳೆಯನ್ನು ನಿರೀಕ್ಷಿಸುವ ಅವನು ಮುಂಗಾರು ಹಿಂಗಾರು ಮಳೆಗಾಗಿ
ತಾಳ್ಮೆಯಿಂದ ಕಾದಿರುತ್ತಾನೆ. 8ಹಾಗೆಯೇ, ನೀವೂ ಸಹ ತಾಳ್ಮೆಯಿಂದಿರಿ, ದೃಢಚಿತ್ತರಾಗಿರಿ. ಪ್ರಭುವಿನ
ಪುನರಾಗಮನ ಸನ್ನಿಹಿತವಾಗಿದೆ.

9 ಸಹೋದರರೇ, ದಂಡನಾತೀರ್ಪಿಗೆ ಗುರಿ ಆಗದಂತೆ ಒಬ್ಬರ ಮೇಲೊಬ್ಬರು ಗೊಣಗುಟ್ಟಬೇಡಿ.
ಇಗೋ, ನ್ಯಾಯಾಧೀಶನು ಬಾಗಿಲ ಬಳಿಯಲ್ಲೇ ನಿಂತಿದ್ದಾನೆ. 10ಸಹೋದರರೇ, ಸಂಕಷ್ಟಗಳನ್ನು ತಾಳ್ಮೆಯಿಂದ
ಸಹಿಸಿದ್ದಕ್ಕೆ ನಿದರ್ಶನ ಬೇಕೇ? ಪ್ರಭುವಿನ ಹೆಸರಿನಲ್ಲಿ ಬೋಧಿಸಿದ ಪ್ರವಾದಿಗಳನ್ನು ಸ್ಮರಿಸಿಕೊಳ್ಳಿ.
11ತಾಳಿದವನು ಬಾಳಿಯಾನು ಎಂದು ಹೇಳುತ್ತೇವಲ್ಲವೇ? ಯೋಬನ ತಾಳ್ಮೆಯನ್ನು ಕುರಿತು ನೀವು
ಕೇಳಿದ್ದೀರಿ. ಅಂತ್ಯದಲ್ಲಿ ಆತನಿಗೆ ಸರ್ವೇಶ್ವರ ದಯಪಾಲಿಸಿದ್ದನ್ನು ಬಲ್ಲಿರಿ. ದೇವರ ದಯೆ ಅನಂತ, ಅವರ
ಅನುಕಂಪ ಅಪಾರ.

**ಪ್ರಾರ್ಥನೆಯೇ ಪರಮೌಷಧ**

12 ಮುಖ್ಯವಾಗಿ ಸಹೋದರರೇ, ಆಣೆಯಿಡಬೇಡಿ. ಪರಲೋಕದ ಮೇಲಾಗಲಿ, ಭೂಲೋಕದ
ಮೇಲಾಗಲಿ, ಇನ್ನಾವುದರ ಮೇಲಾಗಲಿ ನೀವು ಆಣೆಯಿಡಬಾರದು. ಹೌದಾದರೆ ಹೌದು, ಇಲ್ಲವಾದರೆ ಇಲ್ಲ
ಎನ್ನಿ. ಆಗ ನೀವು ದಂಡನಾತೀರ್ಪಿಗೆ ಗುರಿಯಾಗುವುದಿಲ್ಲ. 13ನಿಮ್ಮಲ್ಲಿ ಯಾರಾದರೂ ಸಂಕಟದಲ್ಲಿದ್ದರೆ
ಅಂಥವನು ದೇವರಲ್ಲಿ ಪ್ರಾರ್ಥಿಸಲಿ. ಸಂತೋಷದಲ್ಲಿದ್ದರೆ ದೇವರಿಗೆ ಸ್ತುತಿಗಾನ ಹಾಡಲಿ. 14ನಿಮ್ಮಲ್ಲಿ
ಯಾರಾದರೂ ಅಸ್ವಸ್ಥರಾಗಿದ್ದರೆ, ಅವನು ಸಭಾಪಾಲಕರನ್ನು ಕರೆಸಲಿ. ಅವರು ಅವನಿಗಾಗಿ ದೇವರನ್ನು
ಪ್ರಾರ್ಥಿಸಿ ಪ್ರಭುವಿನ ಹೆಸರಿನಲ್ಲಿ ಅವನನ್ನು ಅಭ್ಯಂಗಿಸಲಿ. 15ಆಗ ವಿಶ್ವಾಸಭರಿತ ಪ್ರಾರ್ಥನೆ ರೋಗಿಯನ್ನು

ಗುಣಪಡಿಸುತ್ತದೆ. ಹಾಸಿಗೆ ಹಿಡಿದ ರೋಗಿಯನ್ನು ಪ್ರಭು ಎಬ್ಬಿಸುತ್ತಾರೆ; ಅವನು ಪಾಪಮಾಡಿದವನಾಗಿದ್ದರೆ
ಕ್ಷಮೆಯನ್ನು ಪಡೆಯುತ್ತಾನೆ. [16]ಆದ್ದರಿಂದ ಒಬ್ಬರಿಗೊಬ್ಬರು ಪಾಪಗಳನ್ನು ಒಪ್ಪಿಕೊಳ್ಳಿರಿ. ಒಬ್ಬರಿಗೊಬ್ಬರು
ಪ್ರಾರ್ಥಿಸಿರಿ. ಆಗ ನೀವು ಸ್ವಸ್ಥರಾಗುತ್ತೀರಿ. ಸತ್ಪುರುಷನ ಪ್ರಾರ್ಥನೆ ಶಕ್ತಿಯುತವಾದುದು ಹಾಗೂ
ಫಲದಾಯಕವಾದುದು. [17]ಎಲೀಯನು ನಮ್ಮಂಥ ಸಾಧಾರಣ ಮನುಷ್ಯ. ಆದರೂ ಅವನು
ಮಳೆಬಾರದಿರಲೆಂದು ಭಕ್ತಿಯಿಂದ ಪ್ರಾರ್ಥಿಸಿದ್ದರಿಂದ ಮೂರು ವರ್ಷ ಆರು ತಿಂಗಳವರೆಗೂ ಮಳೆ
ಬೀಳಲಿಲ್ಲ. [18]ಅನಂತರ, ಅವನು ಮತ್ತೆ ಮಳೆಗಾಗಿ ಪ್ರಾರ್ಥಿಸಿದಾಗ ಆಕಾಶದಿಂದ ಮಳೆ ಸುರಿಯಿತು. ಭೂಮಿ
ಫಲಿಸಿತು.

19 ಸಹೋದರರೇ, ನಿಮ್ಮಲ್ಲಿ ಒಬ್ಬನು ಸತ್ಯದ ಮಾರ್ಗವನ್ನು ಬಿಟ್ಟು ತಪ್ಪಿಹೋದಾಗ ಇನ್ನೊಬ್ಬನು
ಅವನನ್ನು ಸನ್ಮಾರ್ಗಕ್ಕೆ ತಂದರೆ, [20]ಇದನ್ನು ನೆನಪಿಗೆ ತಂದುಕೊಳ್ಳಿರಿ: ಪಾಪಿಯನ್ನು ದುರ್ಮಾರ್ಗದಿಂದ
ಮರಳಿ ಸನ್ಮಾರ್ಗಕ್ಕೆ ತಂದವನು ತನ್ನ ಆತ್ಮವನ್ನು ನಿತ್ಯ ಮರಣದಿಂದ ತಪ್ಪಿಸಿ ತನ್ನ ಲೆಕ್ಕವಿಲ್ಲದ ಪಾಪಗಳಿಗೆ
ಕ್ಷಮೆಯನ್ನು ಪಡೆಯುತ್ತಾನೆ.